# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No. 1 | Issue : 267 | Pages .02 | Date : 11.09.2025 THURSDAY | RNI NO.KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 267 – ಪುಟಗಳು : 02 11.09.2025 ಗುರುವಾರ | Ph : 8762954248 | ದರ : ₹1


## ಫುಡ್ ಕೋರ್ಟ್: ಸ್ವಚ್ಛತೆ ಕಾಪಾಡದಿದ್ದರೆ ಪರವಾನಗಿ ರದ್ದು: ಎಚ್ಚರಿಕೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಮಹಾರಾಜ ಪಾರ್ಕ್ ಬಳಿ ಇರುವ ಫುಡ್‌ಕೋರ್ಟ್‌ಗೆ ಮಹಾನಗರ ಪಾಲಿಕೆ ಪ್ರಭಾರ ಮೇಯರ್ ಹೇಮಾಲತಾ ಕಮಲ್ ಕುಮಾರ್ ಹಾಗೂ ಪರಿಸರ ಪ್ರಭಾರಿ

ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕವಿತಾ ಅವರು ಬುಧವಾರ ಭೇಟಿ ಸ್ವಚ್ಛತೆ ಪರಿಶೀಲನೆ ನಡೆಸಿದರು.

ಈ ವೇಳೆ ಸ್ವಚ್ಛತೆ ಕಾಪಾಡದೆ ಬೇಕಾಬಿಟ್ಟಿಯಾಗಿ ಕಳಪೆ ಆಹಾರ ಮಾರಾಟ ಮಾಡುವ ವ್ಯಾಪಾರಿ ಗಳಿಗೆ ಕಠಿಣ ಎಚ್ಚರಿಕೆ ನೀಡಿದ ಮೇಯರ್, ಮುಂದಿನ ದಿನಗಳಲ್ಲಿ ಈ ರೀತಿಯ

ಲೋಪ ಕಂಡು ಬಂದರೆ ವ್ಯಾಪಾರದ ಅನುಮತಿ ರದ್ದು ಮಾಡಲಾಗುವುದುಎಂದು ಎಚ್ಚರಿಕೆ ನೀಡಿದರು.

ಬಳಿಕ ಮಾತನಾಡಿದ ಮೇಯರ್, ಇತ್ತೀಚೆಗಷ್ಟೇ ಎಂ.ಜಿ. ರಸ್ತೆಯ ಫುಡ್ ಕೋರ್ಟ್‌ನಲ್ಲಿ ಪರಿಶೀಲನೆ ಮಾಡಿದಾಗ ಸ್ವಚ್ಛತೆ ಇರಲಿಲ್ಲ. ಆದರೆ ಇಲ್ಲಿ ಸ್ವಲ್ಪ ಮಟ್ಟಿಗೆ ಸ್ವಚ್ಛತೆ ಕಾಪಾಡಿರುವುದು ಕಂಡುಬಂದಿದೆ ಎಂದರು. ಕೆಲವರು ಪದಾರ್ಥಗಳನ್ನು ಮನೆಯಲ್ಲೇ ತಯಾರಿಸುತ್ತೇವೆ ಎಂದು ಹೇಳಿರುವುದರಿಂದ ಅವರ ಮನೆ ವಿಳಾಸ ಪಡೆದುಕೊಂಡಿದ್ದೇವೆ. ಮುಂದಿನ ಬಾರಿ ಅವರ ಮನೆಗೂ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು.

ದೋಸೆ ಹಿಟ್ಟನ್ನು ಕೈಲಿ ಮಾಡದೆ, ಸ್ವಚ್ಛತೆಯೊಂದಿಗೆ ತಯಾರಿಸಲು ವ್ಯಾಪಾರಿಗಳು ಒಪ್ಪಿಕೊಂಡಿದ್ದಾರೆ. ಕಬಾಬ್ ಗಾಡಿಗಳಲ್ಲಿ ಮಸಾಲೆಯ ಕಲಸಿದ ಕಬಾಬ್‌ನ್ನು ಪ್ಲೇಟ್ ಮುಚ್ಚದೆ ಇಡಲಾಗಿತ್ತು. ಪಾಮಾಯಿಲ್ ಬಳಸಿ ಬೇಯಿಸದೆ, ರಿಫೈನ್ಡ್ ಎಣ್ಣೆ ಬಳಕೆ ಮಾಡುವಂತೆ ಸೂಚಿಸಲಾಗಿದೆ. ಪ್ಲಾಸ್ಟಿಕ್ ಉಪಯೋಗಿಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಈ ಬಾರಿ ದಂಡ ವಿಧಿಸದೆ ಎಚ್ಚರಿಕೆ ನೀಡಿದ್ದೇವೆ. ಮುಂದಿನ ಹಂತದಲ್ಲಿ ದೊಡ್ಡ ಹೋಟೆಲ್‌ಗಳಿಗೂ ಪರಿಶೀಲನೆ ವಿಸ್ತರಿಸಲಾಗುವುದು ಎಂದು ಎಚ್ಚರಿಸಿದರು.

ಪರಿಸರ ಪ್ರಭಾರಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕವಿತಾ ಮಾತನಾಡಿ, ಮೊದಲ ಸಲ ವಾರ್ನಿಂಗ್ ನೀಡುತ್ತಿದ್ದೇವೆ. ಮುಂದಿನ ಬಾರಿ ಸ್ವಚ್ಛತೆ ಇಲ್ಲದಿರುವುದು ಕಂಡುಬಂದರೆ ನೇರವಾಗಿ ದಂಡ ವಿಧಿಸಲಾಗುವುದು. ಎಂ.ಜಿ. ರಸ್ತೆಯ ಫುಡ್ ಕೋರ್ಟ್‌ನಲ್ಲಿ ಎಚ್ಚರಿಕೆ ನೀಡಿದ ನಂತರ ಅಲ್ಲಿನ ವ್ಯಾಪಾರಿಗಳು ಸ್ವಚ್ಛತೆಗೆ ಆದ್ಯತೆ ನೀಡಿರುವುದು ಕಂಡುಬಂದಿದೆ ಎಂದರು. ಆದರೆ ಇನ್ನೂ ಬ್ಯಾನ್ ಮಾಡಿರುವ ಪ್ಲಾಸ್ಟಿಕ್ ಬಾಟಲಿ, ನ್ಯೂಸ್ ಪೇಪರ್ ಬಳಸಿ ಪ್ಯಾಕ್ ಮಾಡುವ ಪದ್ಧತಿ ಮುಂದುವರಿದಿದೆ. ಗ್ರಾಹಕರನ್ನು ದೇವರಂತೆ ನೋಡಬೇಕು. ಜನರು ಸಹ ತಿನ್ನುವ ಸ್ಥಳದಲ್ಲಿ ಸ್ವಚ್ಛತೆ ಇದೆ ಎಂದು ಗಮನಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಡಕೆ ಎಲೆ ಮತ್ತು ಬಾಳೆ ಎಲೆಯಲ್ಲಿ ಸಿದ್ಧಪಡಿಸಿದ ವಸ್ತುಗಳನ್ನು ಉಪಯೋಗಿಸಬೇಕು. ಹಾಸನದಲ್ಲಿ ಕಳಪೆ ಆಹಾರ ಸೇವನೆಯಿಂದಾಗಿ ಅನೇಕರು ಹೃದಯಾಘಾತಕ್ಕೆ ಒಳಗಾಗಿ ಸಾವನ್ನಪ್ಪಿರುವ ಉದಾಹರಣೆ ನಮ್ಮ ಕಣ್ಣ ಮುಂದೆ ಇವೆ. ಆದ್ದರಿಂದ ಸೋಮಾರಿತನ ಮಾಡದೆ ಗೃಹಿಣಿಯರು ಮನೆಯಲ್ಲಿ ತಯಾರಿಸಿದ ಆಹಾರ ಸೇವನೆ ಮಾಡುವುದು ಉತ್ತಮ ಎಂದು ಕಿವಿಮಾತು ಹೇಳಿದರು.

## ವಸತಿ ಯೋಜನೆ ಹಗರಣ ಖಂಡಿಸಿ ಬಿಜೆಪಿ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಧಾನ ಮಂತ್ರಿ ಆವಾಸ್ ಯೋಜನೆ(ಪಿಎಂ–ಎವೈ)ಯಡಿ ಮನೆ ಹಂಚಿಕೆಯಲ್ಲಿ ಸಕಲೇಶಪುರ ತಾಲ್ಲೂಕು ಸೇರಿದಂತೆ ಜಿಲ್ಲೆಯ ವಿವಿಧೆಡೆ ನಡೆದಿರುವ ಅವ್ಯವಹಾರ ಖಂಡಿಸಿ, ತಪ್ಪಿತಸ್ಥರ ಮೇಲೆ ಶಿಸ್ತುಕ್ರಮಕ್ಕೆ ಆಗ್ರಹಿಸಿ ಸಕಲೇಶಪುರ ಬಿಜೆಪಿ ಮಂಡಲ ವತಿಯಿಂದ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಲಾಯಿತು.

ಶಾಸಕ ಸಿಮೆಂಟ್ ಮಂಜು ನೇತೃತ್ವದಲ್ಲಿ ಆರ್.ಸಿ.ರಸ್ತೆಯಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಿಂದ ಮೆರವಣಿಗೆ ಹೊರಟ ಪ್ರತಿಭಟನಾಕಾರರು, ಜಿಲ್ಲಾ ಪಂಚಾಯಿತಿ ಕಚೇರಿ ಎದುರಿಗೆ ಆಗಮಿಸಿ ಕೆಲಕಾಲ ಧರಣಿ ನಡೆಸಿ ಘೋಷಣೆ ಕೂಗಿದರು.

ಸಕಲೇಶಪುರ ತಾಲ್ಲೂಕು ವೊಂದರಲ್ಲೇ 219ಕ್ಕೂ ಹೆಚ್ಚು ಅರ್ಹ ಫಲಾನುಭವಿಗಳಿಗೆ ಸೇರಬೇಕಿದ್ದ 3 ಕೋಟಿಗೂ ಅಧಿಕ ಹಣ ದುರುಪಯೋಗ ಆಗಿದೆ.

ಮನೆ ಯಾರದೋ, ಹಣವನ್ನು ಬೇರೆ ಯಾರದೋ ಖಾತೆಗೆ ಹಣ ವರ್ಗಾವಣೆ ಮಾಡಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಲಾಗಿದೆ ಎಂದು ದೂರಿದರು.

ಈ ವೇಳೆ ಮಾತನಾಡಿದ ಶಾಸಕ ಸಿಮೆಂಟ್ ಮಂಜು, ಇದೊಂದು ದೊಡ್ಡ ಹಗರಣ, ಇದರಲ್ಲಿ ಪಿಡಿಒ, ತಾಪಂ ಇಒ, ಯೋಜನಾ ನಿರ್ದೇಶಕರು, ಜಿಪಂ ಮುಖ್ಯ ಲೆಕ್ಕಾಧಿಕಾರಿ ಸೇರಿದಂತೆ ಹಲವರು ಭಾಗಿಯಾಗಿದ್ದಾರೆ. ಇವರೆಲ್ಲರೂ ಜಿಪಂ ಸಿಇಒ ಅವರ ಅಡಿಯಲ್ಲೇ ಕರ್ತವ್ಯ ನಿರ್ವಹಿಸುವುದರಿಂದ ಈ ವಿಚಾರದಲ್ಲಿ ಸಿಇಒ ಏಕೆ ಮೌನವಾಗಿದ್ದಾರೆ, ಈವರೆಗೂ ಏಕೆ ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಿಲ್ಲ. ಹಗರಣದಲ್ಲಿ ಅವರು ಭಾಗಿಯಾಗಿದ್ದಾರೆಯೇ ಎಂದು ಪ್ರಶ್ನಿಸಿದರು.

ಯಾರೆಲ್ಲ ತಪ್ಪು ಮಾಡಿದ್ದಾರೋ ಅವರನ್ನು ಕೂಡಲೇ ಅಮಾನತು ಮಾಡಿ

ತನಿಖೆ ನಡೆಸಬೇಕು, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು, ಶೀಘ್ರವೇ ಈ ಕಾರ್ಯ ಆಗದಿದ್ದರೆ, ವಿಧಾನಸೌಧದ ಎದುರು ಧರಣಿ ನಡೆಸುವುದಾಗಿ ಎಚ್ಚರಿಕೆ ನೀಡಿದರು.ನಂತರ ಜಿ.ಪಂ. ಸಿಇಒ ಪೂರ್ಣಿಮಾ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿ ಅಮಿತ್‌ಶೆಟ್ಟಿ ಮೊದಲಾದವರು ಭಾಗಿಯಾಗಿದ್ದರು.

# ಕಂದಾಯ ಗ್ರಾಮ: ಕಾನೂನು ಪ್ರಕಾರ ಮುಂದಿನ ಕ್ರಮ

## ಹಡ್ಲಹಳ್ಳಿ–ಕುರಬುತ್ತೂರು ಖಾತೆ ವಿವಾದ: ಅಹವಾಲು ಸ್ವೀಕರಿಸಿದ ಜಿಲ್ಲಾಧಿಕಾರಿ ಲತಾಕುಮಾರಿ





**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಕುರಬುತ್ತೂರು–ಹಡ್ಲಹಳ್ಳಿ ಗ್ರಾಮವನ್ನು ಕಂದಾಯ ಗ್ರಾಮವಾಗಿಸಬೇಕೆಂದು ಸ್ಥಳೀಯರು ಆಗ್ರಹಿಸಿದ್ದು ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಹೇಳಿದರು.

ಆ. 16 ರಂದು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದಿದ್ದ ಜನ ಸ್ಪಂದನ ಸಭೆಯಲ್ಲಿ ಭಾಗವಹಿಸಿದ್ದ ಗ್ರಾಮಸ್ಥರು, ಕೇವಲ ಒಂದು ಕುಟುಂಬಕ್ಕೆ 28 ಎಕರೆ ಜಾಗವನ್ನು ಪ್ಲಾಂಟೇಷನ್ ಹೆಸರಿನಡಿ ಖಾತೆ ಮಾಡಿಕೊಡಲಾಗಿದೆ. ಗ್ರಾಮದ ಜಾಗವನ್ನು ವ್ಯಕ್ತಿಯೊಬ್ಬರಿಗೆ ನೀಡಿದ್ದರಿಂದ ಈಗ ಸುತ್ತಲಿನ ನಾಲ್ಕಾರು ಹಳ್ಳಿಗಳ 160ಕ್ಕೂ ಹೆಚ್ಚು ಕುಟುಂಬಗಳಿಗೆ ತೊಂದರೆಯಾಗುತ್ತಿದೆ ಎಂದು ಅವಲತ್ತುಕೊಂಡಿದ್ದರು.

ಸಮಸ್ಯೆ ಆಲಿಸಿದ್ದ ಜಿಲ್ಲಾಧಿಕಾರಿ ಅವರು, ಸೆ. 10ರಂದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗುವುದು. ಕಂದಾಯ ಗ್ರಾಮವಾಗಿಸುವ ಕುರಿತು ಇರುವ ಸಾಧ್ಯತೆ ಮತ್ತು ಕಾನೂನು ಪರಿಶೀಲಿಸಲಾಗುವುದೆಂದು ಭರವಸೆ ನೀಡಿದ್ದರು. ಅದರಂತೆ ಬುಧವಾರ ಭೇಟಿ ನೀಡಿ ಸ್ಥಳೀಯರ ಸಮಸ್ಯೆ ಆಲಿಸಿದರು.

ಈ ವೇಳೆ ಮಾತನಾಡಿದ ಅವರು, ಇದು ಕಾನೂನಾತ್ಮಕವಾಗಿ ತೆಗೆದುಕೊಳ್ಳುವ ನಿರ್ಧಾರ. ಗಾಮಸ್ಥರು ಶಾಂತ ರೀತಿಯಿಂದ ವರ್ತಿಸಬೇಕು. ಸಮಸ್ಯೆ ಏನು ಎಂಬುದರ ಕುರಿತು ಚರ್ಚಿಸುವುದು ಬೇಡ. ಇಬ್ಬರೂ ಕಕ್ಷಿದಾರರ ದಾಖಲೆಗಳನ್ನು ಪರಿಶೀಲಿಸಿ ಸಮಗ್ರ ವರದಿ ಸಲ್ಲಿಸುವಂತೆ ಉಪವಿಭಾಗಾಧಿಕಾರಿ ರಾಜೇಶ್ ಅವರಿಗೆ ಸೂಚಿಸಲಾಗಿದೆ ಎಂದರು.

ತಹಶೀಲ್ದಾರ್ ಸುಪ್ರೀತಾ, ಗ್ರಾಮದ ಮುಖಂಡರಾದ ರತನ್, ರಾಮಚಂದ್ರಗೌಡ, ರಮೇಶ್, ಯಸಳೂರು ವಲಯ ಅರಣ್ಯಧಿಕಾರಿ ಕೃಷ್ಣ, ಉಪವಲಯಾರಣ್ಯಧಿಕಾರಿ ಕೆ.ಹೆಚ್. ದಯಾನಂದ ಹಾಗೂ ಸಿಬ್ಬಂದಿ ಇದ್ದರು.

### ಭೂಕುಸಿತ ಸ್ಥಳ ಪರಿಶೀಲನೆ

ಧಾರಾಕಾರ ಮಳೆಯಿಂದ ಭೂ ಕುಸಿತ ಸಂಭವಿಸಿದ ಹೆತ್ತೂರು ಹೋಬಳಿ ಬಿಸ್ಲೆ ಘಾಟ್ ರಸ್ತೆಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಭೇಟಿ ನೀಡಿದರು. ಮಳೆಗಾಲದಲ್ಲಿ ವಾಹನಗಳ ಸಂಚಾರಕ್ಕೆ ಭಾರೀ ತೊಂದರೆಯಾಗುತ್ತದೆ. ಸಾರ್ವಜನಿಕರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ರಸ್ತೆಯಲ್ಲಿ ಆಗಾಗ ಸಂಚರಿಸಿ ವಸ್ತುಸ್ಥಿತಿ ಪರಿಶೀಲಿಸಬೇಕೆಂದು ಸೂಚನೆ ನೀಡಿದರು.

### ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ

ಕೇವಲ ಒಂದು ಕುಟುಂಬಕ್ಕೆ 28 ಎಕರೆ ಜಮೀನು ಪ್ಲಾಂಟೇಷನ್‌ಗೆ ಖಾತೆ ಮಾಡಿಕೊಡಲಾಗಿದೆ. 1920ರಲ್ಲಿ 20 ಎಕರೆಯನ್ನು ಪ್ಲಾಂಟೇಷನ್‌ಗೆ ಪಹಣಿ ಮಾಡಿಕೊಡಲಾಗಿತ್ತು. 1965ರಲ್ಲಿ ಉಳಿದ 8 ಎಕರೆಯನ್ನು ಅದೇ ಕುಟುಂಬದ ಮತ್ತೊಬ್ಬರಿಗೆ ಖಾತೆ ಮಾಡಿಕೊಡಲಾಗಿದೆ. ಅದರಿಂದ ಸುತ್ತಲಿನ ನಾಲ್ಕು ಗ್ರಾಮಸ್ಥರಿಗೆ ತೊಂದರೆಯಾಗುತ್ತಿದೆ ಎಂಬುದು ಗ್ರಾಮಸ್ಥರ ಆರೋಪವಾಗಿದೆ. 20ಕ್ಕೂ ಅಧಿಕ ಎಕರೆ ಭೂಮಿಯನ್ನು ವ್ಯಕ್ತಿಯೊಬ್ಬರಿಗೆ ಖಾತೆ ಮಾಡಿಕೊಡುವುದು ಸುಲಭದ ಕೆಲಸವಲ್ಲ. ಆ ವ್ಯಕ್ತಿ ತನ್ನ ರಾಜಕೀಯ ಹಾಗು ಹಣಬಲದಿಂದ ಗ್ರಾಮದ ಜಾಗವನ್ನು ಕಬಳಿಸಿದ್ದಾನೆ. ಈ ಕೃತ್ಯಕ್ಕೆ ಸಹಕರಿಸಿದ ಅಧಿಕಾರಿಗಳಿಗೂ ಶಿಕ್ಷೆ ಯಾಗಬೇಕು. ಹಡ್ಲಹಳ್ಳಿಯನ್ನು ಕಂದಾಯ ಗ್ರಾಮವಾಗಿಸಬೇಕೆನ್ನುವುದು ಅವರ ಆಗ್ರಹವಾಗಿದೆ.

### ನೆಮ್ಮದಿ ಬದುಕಿಗೆ ಭಂಗ

ಜಿಲ್ಲಾಧಿಕಾರಿ ಎದುರು ಗ್ರಾಮಸ್ಥರು ದೂರುಗಳ ಸುರಿಮಳೆಗೈದರು. ರಾತ್ರಿ ವೇಳೆ ಮನೆಗಳ ಮೇಲೆ ಕಲ್ಲು ಬೀಳುತ್ತವೆ. ಏಕಾಏಕಿ ರಸ್ತೆಗೆ ಅಡ್ಡಲಾಗಿ ಕಾಂಪೌಂಡ್ ನಿರ್ಮಿಸಲಾಗುತ್ತಿದೆ. ಹೊಸದಾಗಿ ಮನೆ ಕಟ್ಟಲು ಅಡ್ಡಿಪಡಿಸಲಾಗುತ್ತಿದೆ. ಸಾರ್ವಜನಿಕರ ನೆಮ್ಮದಿ ಬದುಕಿಗೆ ಭಂಗವುಂಟಾಗಿದೆ ಎಂದು ಅಳಲು ತೋಡಿಕೊಂಡರು.

ಗ್ರಾಮದ ಸುಮಾರು 28 ಎಕರೆ ಪ್ರದೇಶದಲ್ಲಿ ಪೂರ್ವಿಕರಿಂದ 160ಕ್ಕೂ ಹೆಚ್ಚು ಕುಟುಂಬಗಳು ವಾಸಿಸುತ್ತಿವೆ. ದೇವಸ್ಥಾನ, ಸ್ಮಶಾನ ಗ್ರಾಮದಲ್ಲೇ ಇದೆ. ಆದರೆ, ಕಾಲಕ್ರಮೇಣ ಗ್ರಾಮಸ್ಥರ ಗಮನಕ್ಕೆ ಬಾರದಂತೆ ವ್ಯಕ್ತಿಯೊಬ್ಬರಿಗೆ ಪ್ರದೇಶ ಮಂಜೂರಾಗಿದೆ. ಇದುವರೆಗೆ ಮಂಜೂರಾದ ವ್ಯಕ್ತಿ ಗ್ರಾಮಸ್ಥರಿಗೆ ತೊಂದರೆ ನೀಡದೇ ಇರುವುದರಿಂದ ಯಾವುದೇ ಸಮಸ್ಯೆ ಉದ್ಭವಿಸಿರಲಿಲ್ಲ.

ಆದರೆ ಇತ್ತೀಚೆಗೆ ಗ್ರಾಮ ದೇವರಿಗೆ ಹೊಸದಾಗಿ ಗುಡಿ ನಿರ್ಮಿಸಲು ಮುಂದಾದ ವೇಳೆ ಸಮಸ್ಯೆ ಬಿಗಡಾಯಿಸಿದೆ. ಗುಡಿ ನಿರ್ಮಾಣಕ್ಕೆ ಅವಕಾಶ ನೀಡಿದ ಕುಟುಂಬ, ಇಡೀ ಗ್ರಾಮ ನಮಗೆ ಸೇರಿದೆ ಎಂದು ತೊಂದರೆ ನೀಡುತ್ತಿದೆ. ಹೊಸ ಮನೆ ಕಟ್ಟಲು ಅವಕಾಶ ಮಾಡಿಕೊಡುತ್ತಿಲ್ಲ. ರಸ್ತೆ ಬಂದ್ ಮಾಡಿ ಸಂಚಾರಕ್ಕೆ ತೊಂದರೆಯುಂಟು ಮಾಡುತ್ತಾರೆ. ರಾತ್ರಿ ವೇಳೆ ಮನೆಗಳ ಮೇಲೆ ಕಲ್ಲು ಬೀಳುತ್ತಿದೆ. ಈ ಸಮಸ್ಯೆಗಳಿಂದ ನಮ್ಮನ್ನು ಪಾರು ಮಾಡಬೇಕೆಂದು ಗ್ರಾಮಸ್ಥರು ಅವಲತ್ತುಕೊಂಡರು.

## ಸ್ವಾಭಿಮಾನದ ಬದುಕಿಗೆ ಶಿಕ್ಷಣ ಅತ್ಯವಶ್ಯ: ಜಿಲ್ಲಾಧಿಕಾರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅಕ್ಷರ ಕಲಿತವರೆಲ್ಲರೂ ಬಿಡುವಿನ ಸಮಯದಲ್ಲಿ ಅನಕ್ಷರಸ್ಥರಿಗೆ ನೆರವಾಗಿ ಸಾಕ್ಷರತಾ ಪ್ರಮಾಣ ಹೆಚ್ಚಳಕ್ಕೆ ಕೈ ಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸಲಹೆ ನೀಡಿದರು.

ಜಿಲ್ಲಾಡಳಿತ, ಜಿ.ಪಂ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಯಸ್ಕರ ಶಿಕ್ಷಣ ಇಲಾಖೆ ವತಿಯಿಂದ ನಗರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿ ಎದುರು ಇತ್ತೀಚೆಗೆ ಹಮ್ಮಿ ಕೊಂಡಿದ್ದ 59ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಜಿಲ್ಲೆಯಲ್ಲಿ ಸಾಕ್ಷರತೆ ಪ್ರಮಾಣ ಹೆಚ್ಚಿಸಲು ವಿದ್ಯಾವಂತ ಯುವಕ–ಯುವತಿಯರು ಕೈ ಜೋಡಿಸಬೇಕು. ಕಲಿಕೆಯಿಂದ ಸ್ವಾಭಿಮಾನ, ಆತಗೌರವ ಹೆಚ್ಚುತ್ತದೆ. ಮನುಷ್ಯ ಕಲಿಯುವುದರ ಜೊತೆಗೆ ಪ್ರೀತಿ, ವಿಶ್ವಾಸ, ಸಂಸ್ಕಾರ, ಅರಿವು, ತಿಳಿವಳಿಕೆ ಹೊಂದುತ್ತಾನೆ. ಎಂದರು.

ಜಿ.ಪಂ. ಸಿಇಒ ಬಿ.ಆರ್. ಪೂರ್ಣಿಮಾ ಮಾತನಾಡಿ, ಅನಕ್ಷರಸ್ಥರಿಗೆ ಅಕ್ಷರ ಕಲಿಸುವ ಉದ್ದೇಶದಿಂದ 1990–97ರ ವರೆಗೆ ಸಾಕ್ಷರತಾ ಆಂದೋಲನ ಮೂಲಕ ಅಕ್ಷರ ಕ್ರಾಂತಿ ನಡೆಯಿತು. ಜಿಲ್ಲೆಯಲ್ಲಿ ಕಳೆದ ದಶಕದಲ್ಲಿ ವಿವಿಧ ಸಾಕ್ಷರತಾ ಕಾರ್ಯಕ್ರಮಗಳ ಮೂಲಕ ಸುಮಾರು 80,000 ಜನರನ್ನು ಅಕ್ಷರಸ್ಥರನ್ನಾಗಿ ಮಾಡಿದ್ದೇವೆ. ಸಾಕ್ಷರ ಸನಾನ ಕಾರ್ಯಕ್ರಮದ ಮೂಲಕ ಜಿಲ್ಲೆಯ 170 ಗ್ರಾ.ಪಂ. ಅನಕ್ಷರಸ್ಥ ಸದಸ್ಯರನ್ನು ಅಕ್ಷರಸ್ಥರನ್ನಾಗಿ ಮಾಡಲಾಗಿದೆ ಎಂದು ತಿಳಿಸಿದರು.

ಸಂಸ್ಥೆ ಉಪನಿರ್ದೇಶಕ ರಂಗನಾಥಸ್ವಾಮಿ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಎಂ. ಕಾಂತರಾಜ್, ಜಿಲ್ಲಾ ರೆಡ್ ಕ್ರಾಸ್ ನಿರ್ದೇಶಕ ಎಸ್.ಎಸ್. ಪಾಷಾ,ಡಯಟ್‌ನ ಉಪನ್ಯಾಸಕ ಚಂದ್ರೇಗೌಡ ಮಾತನಾಡಿದರು. ಸಾಕ್ಷರತಾ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದ ಸ್ವಯಂ ಸೇವಕರಾದ ಹರಿಪ್ರಸಾದ್ ಹಾಗೂ ಯಾಕೂಬ್ ಅವರನ್ನು ಸನಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸಾಕ್ಷರತಾ ಸಮಿತಿ ಕಾರ್ಯಕಾರಿ ಸಮಿತಿ ಸದಸ್ಯ ಎಸ್.ಎಸ್. ಪಾಷ, ರೆಡ್ ಕ್ರಾಸ್ ಜಿಲ್ಲಾ ಸಭಾಪತಿ ಹೆಚ್.ಪಿ. ಮೋಹನ್, ಬಿ.ಆರ್. ಉದಯ್ ಕುಮಾರ್, ಡಾ. ಅಬ್ದುಲ್ ಬಷೀರ್, ಕ್ಷೇತ್ರ ಶಿಕ್ಷಣಾಧಿಕಾರಿ ಕೆ. ರಂಗನಾಥ, ಮತ್ತಿತರರಿದ್ದರು.

## ಮದ್ದೂರು ಗಲಾಟೆ: ಕಿಡಿಗೇಡಿಗಳ ವಿರುದ್ಧ ಕ್ರಮಕ್ಕೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಮಂಡ್ಯ ಜಿಲ್ಲೆ ಮದ್ದೂರಿನಲ್ಲಿ ಗಣೇಶ ಮೂರ್ತಿ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆಸಿದ ಕಿಡಿಗೇಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಹಿಂದು ಹಿತ ರಕ್ಷಣಾ ವೇದಿಕೆ ಮುಖಂಡ ರಘು ಸಕಲೇಶಪುರ ಆಗ್ರಹಿಸಿದರು.

ಉಪವಿಭಾಗಾಧಿಕಾರಿ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಮಾತನಾಡಿ, ಕಲ್ಲು ತೂರಾಟ ಮಾಡಿ ಕೋಮುಗಲಭೆ ಸೃಷ್ಟಿಸಿದ ಗಲಭೆಕೋರರರನ್ನು ಯುಎಪಿಎ ಕಾಯ್ದೆ ಅಡಿ ಬಂಧಿಸಬೇಕು.

ಮದ್ದೂರಿನಲ್ಲಿ ಗಣಪತಿ ವಿಸರ್ಜನಾ ಮೆರವಣಿಗೆ ಮೇಲೆ ಕಲ್ಲುತೂರಾಟ ಮಾಡಿದ್ದನ್ನು ಖಂಡಿಸಿ ಶಾಂತಿಯುತ ಪ್ರತಿಭಟನೆ ಮಾಡುತ್ತಿದ್ದ ಹಿಂದುಗಳ ಮೇಲೆ ಪೊಲೀಸರು ಲಾಠಿ ಚಾರ್ಜ್ ಮಾಡಿದ್ದು ಖಂಡನೀಯ. ಪೊಲೀಸ್ ಮಹಾನಿರ್ದೇಶಕರು ಯಾವ ಕಾರಣಕ್ಕೆ ಲಾಠಿ ಚಾರ್ಜ್ ಮಾಡಲು ಆದೇಶಿಸಿದ್ದಾರೆ ಎಂಬುದು ತನಿಖೆ ಆಗಬೇಕು. ಮದ್ದೂರಿನಲ್ಲಿ ಮಹಿಳಾ ಪ್ರತಿಭಟನಾಕಾರರ ಮೇಲೆ ಏಕಾಏಕಿ ಲಾಠಿಪ್ರಹಾರ ಮಾಡಿರುವುದರ ಹಿಂದಿನ ಉದ್ದೇಶವೇನು ಎಂದು ಪ್ರಶ್ನಿಸಿದರು.

ಸಂಘಟನೆಯ ಪ್ರಮುಖರಾದ ಶಿವು ಜಿಪ್ಪಿ, ಮಹೇಶ್, ವಿಜಿತ್, ವಿನೋದ್, ಸುಪ್ರೀತ್ ಹಾಜರಿದ್ದರು.




ಹಾಸನ: ತಾಲೂಕಿನ ಶಾಂತಿಗ್ರಾಮ ಸಮೀಪದ ಪ್ರದೀಪ್ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಕೃಷ್ಣ ಜನಾಷ್ಟಮಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಶಾಲೆಯ ವಿದ್ಯಾರ್ಥಿಗಳು ಕೃಷ್ಣ ಮತ್ತು ರಾಧೆಯ ವೇಷಭೂಷಣದಲ್ಲಿ ಕಂಗೊಳಿಸಿದರು. ಇದೇ ವೇಳೆ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಎಲ್ಲರ ಗಮನ ಸೆಳೆದವು. ಗೀತಾ ಶ್ಲೋಕ ಪಠಣ, ಭಜನೆ ಹಾಗೂ ನೃತ್ಯಗಳಿಂದ ಶಾಲಾ ಆವರಣವೇ ಹಬ್ಬದ ವಾತಾವರಣ ಪಡೆದಿತ್ತು. ಮಕ್ಕಳ ಮಾತೆ ಕಟ್ಟಿ (ದಹಿಹಂಡಿ) ಆಟ ಎಲ್ಲರ ಗಮನ ಸೆಳೆಯಿತು.

ಶಾಲೆಯ ಮುಖ್ಯೋಪಾಧ್ಯಾಯರು ಮಕ್ಕಳಿಗೆ ಕೃಷ್ಣನ ಬಾಲ್ಯಚರಿತ್ರೆ ಹಾಗೂ ಅವರ ಉಪದೇಶಗಳ ಕುರಿತು ಉಪನ್ಯಾಸ ನೀಡಿದರು. ಪೋಷಕರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

# ಜಾತಿ ರಹಿತ ಸಮಾಜ ನಿರ್ಮಾಣ ಶರಣರ ಆಶಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಾತಿ, ಅಸ್ಪೃಶ್ಯತೆ, ಸ್ತ್ರೀ ಅಸಮಾನತೆ, ಮೌಢ್ಯದಿಂದ ಸಮಾಜ ದೂರವಿರಬೇಕು ಎನ್ನುವುದೇ ಶಿವ ಶರಣರ ಆಶಯವಾಗಿತ್ತು. ಅದನ್ನು ಸಾಕಾರಗೊಳಿಸುವ ಉದ್ದೇಶದಿಂದಲೇ ಸುತ್ತೂರಿನ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಸ್ಥಾಪಿಸಿದ್ದಾರೆ ಎಂದು ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ ಹೇಳಿದರು.

ತಣ್ಣೀರುಹಳ್ಳ ಮಠದ ಶ್ರೀ ಸಿದ್ದೇಶ್ವರ ವಿದ್ಯಾಸಂಸ್ಥೆ ಸಭಾಂಗಣದಲ್ಲಿ ಬುಧವಾರ ನಡೆದ ಶ್ರೀ ಶಿವಲಿಂಗ ಸ್ವಾಮೀಜಿ ಅವರ ದತ್ತಿ ಉಪನ್ಯಾಸ ಹಾಗೂ ವಚನ ಕಂಠಪಾಠ ಮಾಡಿದ ವಿದ್ಯಾರ್ಥಿಗಳಿಗೆ ಪುಸ್ತಕ ವಿತರಣೆ ಸಮಾರಂಭದಲ್ಲಿ ಮಾತನಾಡಿ, 12ನೇ ಶತಮಾನದ ವಿಶ್ವಗುರು ಬಸವಣ್ಣ ಅವರು ಮಾನವ ಧರ್ಮವನ್ನು ಸಂರಕ್ಷಣೆ ಮಾಡಿದ ಮಹಾನ್ ಪುರುಷ. ಬಸವಾದಿ ಶರಣರು ಅಂದಿನ ಕಾಲದಲ್ಲಿ ಜಾರಿಯಲ್ಲಿದ್ದ ಅಸಮಾನತೆ ಮತ್ತು ಜಾತಿ ನಡುವಿನ ಬಡಿದಾಟ ಕಂಡು ಅನುಭವ ಮಂಟಪ ನಿರ್ಮಿಸಿದರು. ಸರ್ವರಿಗೂ ಸಮಾನತೆ ನೀಡಲು, ಸ್ತ್ರೀ ಶೋಷಣೆ ವಿರುದ್ಧ ಹೋರಾಡಿದರು. ವಚನ ಕ್ರಾಂತಿ ಮೂಲಕ ಕನ್ನಡ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದರು.

ವಚನ ಸಾಹಿತ್ಯ ಮತ್ತು ಶರಣ ಸಂಸ್ಕೃತಿ ಉಳಿಸಿ ಬೆಳೆಸಬೇಕೆಂಬ ಉದ್ದೇಶದಿಂದ ಸುತ್ತೂರಿನ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಸ್ಥಾಪಿಸಿದ್ದಾರೆ. ಶರಣ ಸಾಹಿತ್ಯ ಪರಿಷತ್ತು ಶರಣರ ವಚನಗಳನ್ನು ಜನಸಾಮಾನ್ಯರಿಗೆ ತಿಳಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿದೆ. ಮಹನೀಯರ ಸಂದೇಶ ಮತ್ತು ಆಚಾರ–ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ಇಂತಹ ಕಾರ್ಯಕ್ರಮದ ಅರ್ಥ ಪೂರ್ಣತೆಗೆ ಮುನ್ನುಡಿ ಬರೆಯಬೇಕೆಂದು ಕರೆ ನೀಡಿದರು.


ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಪ್ರಧಾನ ಕಾರ್ಯದರ್ಶಿ ಕಟ್ಟಾಯ ಶಿವಕುಮಾರ್ ಮಾತನಾಡಿ, ವಚನದ ಸಂದೇಶಗಳಿಂದ ಮಾತ್ರ ಮಾನವನ ಬದುಕನ್ನು ಉಜ್ವಲಗೊಳಿಸಲು ಸಾಧ್ಯ. ನುಡಿದಂತೆ ನಡೆ, ನಡೆದಂತೆ ನುಡಿಯ ಮೂಲಕ ಬದುಕು ಮಾದರಿಯಾಗಬೇಕಿದೆ. ಈ ನಿಟ್ಟಿನಲ್ಲಿ ಡಾ. ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ ದೂರದೃಷ್ಟಿಯಿಂದ ಸ್ಥಾಪನೆಯಾದ ಪರಿಷತ್ ಉತ್ತಮ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ವಿಶ್ವ ವೀರಶೈವ–ಲಿಂಗಾಯತ ಮಹಾ ವೇದಿಕೆ ರಾಜ್ಯ ಉಪಾಧ್ಯಕ್ಷ ಬಿ.ಆರ್. ಪಂಚಾಕ್ಷರಿ ದತ್ತಿ ಉಪನ್ಯಾಸ ನೀಡಿದರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಎನ್. ಕುಮಾರಸ್ವಾಮಿ, ತಣ್ಣೀರುಹಳ್ಳಮಠ ಶ್ರೀ ಸಿದ್ದೇಶ್ವರ ವಿದ್ಯಾಸಂಸ್ಥೆಯ ನಿರ್ದೇಶಕ ಶರಣ ಸೋಮಣ್ಣ ಅಧ್ಯಕ್ಷತೆ ವಹಿಸಿದ್ದರು. ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಹನುಮಂತಪುರ ಪುಟ್ಟರಾಜು, ತಾಲ್ಲೂಕು ಕದಳಿ ವೇದಿಕೆ ಅಧ್ಯಕ್ಷೆ ಗಿರಿಜಾ ನಿರ್ವಾಣಿ, ಆರ್. ಕೆ. ಶ್ರೀನಿವಾಸ್, ಪ್ರಾಂಶುಪಾಲ ತುಂಗರಾಜ್, ಮುಖ್ಯ ಶಿಕ್ಷಕ ಎನ್.ಎನ್. ಮಲ್ಲಿಕಾರ್ಜುನ ಇತರರಿದ್ದರು.

# ಬಾನು ಮುಷ್ತಾಕ್ ದಸರಾ ಉದ್ಘಾಟನೆಯಿಂದ ಹಿಂದೆ ಸರಿಯಬೇಕು: ಎಸ್.ವಿಶ್ವನಾಥ ದೀಕ್ಷಿತ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ನಮ್ಮ ಧರ್ಮ, ಸಂಸ್ಕೃತಿಯನ್ನು ಟೀಕಿಸಿರುವ ಬಾನು ಮುಷ್ತಾಕ್ ಅವರು ದಸರಾ ಉದ್ಘಾಟಿಸಲು ಅವಕಾಶ ನೀಡಿದ ಸರ್ಕಾರದ ಕ್ರಮ ಸರಿಯಿಲ್ಲ, ತಮ್ಮ ಧರ್ಮಕ್ಕೆ ಗೌರವ ಕೊಡುವ ಅವರು ಹಿಂದೂ ಧರ್ಮಕ್ಕೂ ಗೌರವ ಕೊಟ್ಟು, ತಾವಾಗೇ ದಸರಾ ಉದ್ಘಾಟನೆಯಿಂದ ಹಿಂದೆ ಸರಿಯಬೇಕು ಎಂದು ಪಟ್ಟಣದ ದೀಕ್ಷಿತ್ ಪ್ರತಿಷ್ಠಾನಮ್‌ನ ಅಧ್ಯಕ್ಷ ಡಾ.ಎಂ.ಎಸ್.ವಿಶ್ವನಾಥ ದೀಕ್ಷಿತ್ ಆಗ್ರಹಿಸಿದರು.



ಪಟ್ಟಣದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ತಾಯಿ ಭುವನೇಶ್ವರಿಯ ಅರಿಸಿನ, ಕುಂಕುಮ ಬಗ್ಗೆ ಬಾನುಮುಷ್ತಾಕ್ ಅವಹೇಳನಕಾರಿ ಮಾತನಾಡಿದ್ದಾರೆ

ಅವರ ಆಯ್ಕೆ ವಿರುದ್ಧ ಸಂಘ ಸಂಸ್ಥೆಗಳು, ಕನ್ನಡಪರ ಸಂಘಟನೆಗಳು, ಸಾಹಿತಿಗಳು, ಧಾರ್ಮಿಕ ಮುಖಂಡರು ಮಾತನಾಡಿದ್ದರೂ ಭಾನು ಮುಷ್ತಾಕ್ ಅವರು ತಮ್ಮ ನಿರ್ಧಾರದಿಂದ ಹಿಂದೆ ಸರಿಯದಿರುವುದು ಸರಿಯಲ್ಲ. ದಸರಾ ಹಿಂದೂ ಧಾರ್ಮಿಕ ಉತ್ಸವವಾಗಿದ್ದು, ಇದರ ಉದ್ಘಾಟನೆಗೆ ಹಿಂದೂ ಶ್ರದ್ಧೆ ಹೊಂದಿರುವವರನ್ನು ಮಾತ್ರ ಆಯ್ಕೆ ಮಾಡಬೇಕು. ವರದಿಗಳ ಪ್ರಕಾರ, ಬಾನು ಮುಷ್ತಾಕ್ ಅವರು ಹಳೆಯ ವೀಡಿಯೋದಲ್ಲಿ ಕನ್ನಡ ಭಾಷೆಯನ್ನು ದೇವತೆಯಾಗಿ ಪೂಜಿಸುವ ಪದ್ಧತಿಯನ್ನು ಪ್ರಶ್ನಿಸಿದ್ದರು. ಇದು ಭಾಷಾ ಅಲ್ಪಸಂಖ್ಯಾತರನ್ನು ಹೊರಗಿಡುತ್ತದೆ ಎಂದು ಹೇಳಿದ್ದರು. ಇದನ್ನು ಆಧರಿಸಿ ಅನೇಕರು ಅವರ ಶ್ರದ್ಧೆಯನ್ನು ಪ್ರಶ್ನಿಸಿದ್ದಾರೆ ಹಾಗೂ ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ದಸರಾ ಹಿಂದೂ ಸಾಂಸ್ಕೃತಿ–ಕ ಉತ್ಸವವಾಗಿದ್ದು, ಗಣೇಶ ಪೂಜೆ, ಶಮಿ ಪೂಜೆಗಳಂತಹ ಧಾರ್ಮಿಕ ಕ್ರಿಯೆಗಳನ್ನು ನಿರ್ವಹಿಸುವವರು ಹಿಂದೂ ಶ್ರದ್ಧೆ ಹೊಂದಿರಬೇಕು. ಧರ್ಮದ ವಿರುದ್ಧವಾಗಿ ಹೇಳಿರುವುದರಿಂದ ಇಂತಹ ಪ್ರಶ್ನೆಗಳು ಸಹಜವಾಗಿ ಮೂಡುತ್ತಿವೆ. ವಿಗ್ರಹವನ್ನು ಮೆರವಣಿಗೆಯಲ್ಲಿ ಕರೆದುಕೊಂಡು ಹೋಗುತ್ತಾರೆ. ಚಾಮುಂಡೇಶ್ವ–ರಿಯ ವಿಗ್ರಹವಾಗಿರುವ ಕಾರಣ ಅವರಿಗೆ ಅದರ ಬಗ್ಗೆ ಅಪಾರವಾದ ಗೌರವವಿದೆಯಾ, ಜೊತೆಗೆ ಧಾರ್ಮಿಕ ಪದ್ಧತಿಗಳಿಗೆ ವಿಧಿ–ವಿಧಾನಗಳಿಗೆ ಅವರಿಗೆ ಗೌರವವಿದೆಯೆ ಎಂದರು.

ನಾನೂರು ವರ್ಷದ ಪರಂಪರೆಯಿಂದ ಚಾಮುಂಡೇಶ್ವರಿ ತಾಯಿಯನ್ನು ನಾವೆಲ್ಲಾ ಆರಾಧಿಸುತ್ತ ಬಂದಿದ್ದೇವೆ. ಈ ನಿಟ್ಟಿನಲ್ಲಿ ಬಾನು ಮುಷ್ತಾಕ್ ಅವರು ಚಾಮುಂಡೇಶ್ವರಿಗೆ ತಾಯಿಗೆ ಗೌರವ ಕೊಟ್ಟು,

ನಮ್ಮ ಭಾವನೆಗಳಿಗೆ ಧಕ್ಕೆಯಾಗದಂತೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರಾ ಎಂಬ ಸಹಜವಾದ ಪ್ರಶ್ನೆ ಮೂಡಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಕನ್ನಡ ಭಾಷೆ ಮತ್ತು ರಾಜ್ಯಕ್ಕೆ ಗೌರವ ತಂದು ಕೊಟ್ಟ ಕೀರ್ತಿ ಲೇಖಕಿ ಬಾನು ಮುಷ್ತಾಕ್ ಅವರಿಗೆ ಸಲ್ಲುತ್ತದೆ. ಜೊತೆಗೆ ಸಾಮಾಜಿ–ಕ ಹೋರಾಟ ಮಾಡಿದ್ದಾರೆ. ಎಲ್ಲ ಶ್ಲಾಘನೀಯವಾದ ಕೆಲಸ ಮಾಡಿದ್ದಾರೆ. ಆದರೆ, ದಸರಾ ಒಂದು ಧಾರ್ಮಿಕ ಆಚ–ರಣೆ, ಅದಕ್ಕೆ ಧಾರ್ಮಿಕ ಹಿನ್ನೆಲೆ ಹಾಗೂ ನಾನೂರು ವರ್ಷಗಳ ಪರಂಪರೆಯಿದೆ. ಚಾಮುಂಡೇಶ್ವ–ರಿಯನ್ನು ಆರಾಧಿಸುವ ದೃಷ್ಟಿಯ ಹಿನ್ನೆಲೆಯಲ್ಲಿ ನಾವೆಲ್ಲಾ ಬಂದಿದ್ದೇವೆ. ಈ ನಿಟ್ಟಿನಲ್ಲಿ ಅವರು ಕೂಡ ಚಾಮುಂಡೇಶ್ವರಿಗೆ ಗೌರವ ಕೊಟ್ಟು, ಇಲ್ಲಿ ಯಾವುದೇ ರೀತಿ ಯಾರ ಭಾವನೆಗೂ ಧಕ್ಕೆ ಕೊಡದೇ ಉದ್ಘಾಟನೆಯಿಂದ ಹಿಂದೆ ಸರಿಯಬೇಕು, ಬದಲಿಗೆ ದಸರಾ ವಸ್ತು ಪ್ರದರ್ಶನ ಸೇ–ರಿದಂತೆ ಅನ್ಯ ಕಾರ್ಯಕ್ರಮಗ ಉದ್ಘಾಟನೆ ಅವಕಾಶ ನೀಡಲಿ ಎಂದರು.

ಸುದ್ದಿಗೋಷ್ಠಿಯಲ್ಲಿ ದೀಕ್ಷಿತ್ ಪ್ರತಿಷ್ಠಾನಮ್‌ನ ಉಪಾಧ್ಯಕ್ಷ ರಾಘವೇಂದ್ರ ಅಂಕಂ, ಸಂಚಾಲಕ ತೇಜಸ್ ಗೌಡ, ನಿರ್ದೇಶಕರಾದ ಭರತ್ ಶೆಟ್ಟಿ, ಸೀತಾರಾಮ ಭಾಗವಹಿಸಿದ್ದರು.

# ಸಕಲೇಶಪುರ ಪಿ.ಎಂ.ಎ.ವೈ ಹಗರಣ: 3 ಕೋಟಿಗೂ ಹೆಚ್ಚು ಅವ್ಯವಹಾರ ಪ್ರತಿಭಟನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯ ಸಕಲೇಶಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಪ್ರಧಾನಮಂತ್ರಿ ಆವಾಸ್ ಯೋಜನೆಯಲ್ಲಿ 3 ಕೋಟಿಗೂ ಹೆಚ್ಚು ಅವ್ಯವಹಾರದ ಗಂಭೀರ ಆರೋಪದ ಹಿನ್ನೆಲೆಯಲ್ಲಿ, ಬಿಜೆಪಿ ಪಕ್ಷದ ಜಿಲ್ಲಾ ಘಟಕದ ನೇತೃತ್ವದಲ್ಲಿ ಹಾಸನ ಜಿಲ್ಲಾ ಪಂಚಾಯತಿ ಕಚೇರಿ ಎದುರು ಬುಧವಾರದಂದು ಬೃಹತ್ ಪ್ರತಿಭಟನೆ ನಡೆಸಿ, ಅಧಿಕಾ–



ರಿಗಳನ್ನು ಅಮಾನತು ಮಾಡಬೇಕು ಹಾಗೂ ಅವರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಆಲೂರು–ಸಕಲೇಶಪುರ ವಿಧಾನಸಭಾ ಕ್ಷೇತ್ರದ ಶಾಸಕ ಸಿಮೆಂಟ್ ಮಂಜು ಮಾಧ್ಯಮದೊಂದಿಗೆ ಮಾತನಾಡಿ, "ಹಾಸನ ಜಿಲ್ಲೆಯ ಸಕಲೇಶಪುರ ವಿಧಾನಸಭಾ ಕ್ಷೇತ್ರದಲ್ಲಿ ಪಿಎಂ–ಎವೈ ಯೋಜನೆ ಅಡಿಯಲ್ಲಿ ರೂ.3 ಕೋಟಿಗೂ ಹೆಚ್ಚು ಹಣದ ಅವ್ಯವಹಾರ ನಡೆದಿದೆ. 219ಕ್ಕೂ ಹೆಚ್ಚು ಅರ್ಹ ಫಲಾನುಭವಿಗಳಿಗೆ ತಲುಪಬೇಕಿದ್ದ ಸರ್ಕಾರದ ಅನುದಾನವನ್ನು ಅಧಿಕಾ–ರಿಗಳೇ ದುರುಪಯೋಗ ಮಾಡಿಕೊಂಡಿದ್ದಾರೆ. ಯೋಜನೆಯ ಅನುಷ್ಠಾನದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಮಟ್ಟದ ಯೋಜನಾ ನಿರ್ದೇಶಕರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳ ವಿರುದ್ಧ ಗಂಭೀರ ಆರೋಪಗಳು ಕೇಳಿಬಂದಿವೆ ಎಂದು ದೂರಿದರು. ಯೋಜನೆಯ ಪ್ರಕ್ರಿಯೆ ಡಿಜಿಟಲ್ ವ್ಯವಸ್ಥೆಯ ಮೂಲಕ ನಡೆಯುವ ಸಂದರ್ಭದಲ್ಲಿ ಅಧಿಕಾ–ರಿಗಳ ಲಾಗಿನ್ ಬಳಸಿಕೊಂಡು ಅನುಮೋದನೆ ನೀಡಲಾಗಿದೆ. ಫಲಾನುಭವಿಗಳ ಪಟ್ಟಿಯಲ್ಲಿ ನಕಲಿ ದಾಖಲೆಗಳನ್ನು ಸೇರಿಸಿ, ಹಣವನ್ನು ಬೇರೆ ಖಾತೆಗಳಿಗೆ ಜಮಾ ಮಾಡುವ ದುರುದ್ದೇಶಿತ ಕ್ರಮ ಕೈಗೊಳ್ಳಲಾಗಿದೆ. ಇದು ಅರ್ಹ ಫಲಾನುಭವಿಗಳ ಹಕ್ಕನ್ನು ಕಸಿದುಕೊಳ್ಳುವುದಲ್ಲದೆ, ಸರ್ಕಾರಿ ಯೋಜನೆಯ ವಿಶ್ವಾಸಾರ್ಹತೆಯನ್ನೇ ಹಾಳು ಮಾಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಸವಿತಾ ಸಮಾಜದವರೂ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಬೇಕು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸವಿತಾ ಸಮಾಜದವರು ತಮ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಲು ಮುಂದಾದರೆ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.



ಪಟ್ಟಣದ ಸವಿತಾ ಸಭಾಂಗಣದಲ್ಲಿ ಸವಿತಾ ಸಮಾಜದ ವತಿಯಿಂದ ಆಯೋಜಿಸಲಾಗಿದ್ದ 16ನೇ ವರ್ಷದ ವಾರ್ಷಿಕ ಮಹಾಸಭೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸವಿತಾ ಸಮಾಜದವರು ಸಣ್ಣ ಸಮಾಜವೆಂದು ಆತಂಕ ಪಡುವ ಅಗತ್ಯವಿಲ್ಲ. ಸಮಾಜ–ಕ್ಕೆ ತನ್ನದೇ ಆದ ಶಕ್ತಿ ಇದೆ. ನಾನು ಶಾಸಕನಾಗಲು ಸವಿತಾ ಸಮಾಜದ ಪಾತ್ರ ಮಹತ್ವದ್ದಾಗಿದೆ. ಹೊರ ರಾಜ್ಯದವರು ಇಲ್ಲಿಗೆ ಬಂದು ಸವಿತಾ ಸಮಾಜದ ವೃತ್ತಿಯನ್ನು ಮಾಡುತ್ತಿದ್ದಾರೆ. ಆದರೆ, ಈ ಹಿಂದಿನಂತೆ ಮಂಗಳವಾರ ರಜೆ ಮಾಡದೆ ಕಾರ್ಯನಿರ್ವಹಿಸುತ್ತಿರುವುದು ಸರಿಯಲ್ಲ. ಅವರು ಸಹ ಸಮಾಜದ ನಿಯಮಗಳನ್ನು ಪಾಲಿಸಬೇಕು. ಸವಿತಾ ಸಮಾಜದ ಬಂಧುಗಳು ತಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಅವರನ್ನು ಐಎಎಸ್ ಹಾಗೂ ಐಪಿಎಸ್ ಅಧಿಕಾರಿಗಳನ್ನಾಗಿ ಮಾಡಬೇಕು. ಆಗಮಾತ್ರ ಸಮಾಜದ ಏಳಿಗೆ ಸಾಧ್ಯ. ಇತ್ತೀಚೆಗೆ ನಮ ಪುಣ್ಯ ಕ್ಷೇತ್ರ ಧರ್ಮಸ್ಥಳದ ಹೆಸರನ್ನು ಹಾಳು ಮಾಡಲು ಕೆಲವರು ಅಪಪ್ರಚಾರ ಮಾಡುತ್ತಿದ್ದಾರೆ. ಯಾರೂ ಅಪಪ್ರಚಾರಕ್ಕೆ ಕಿವಿಕೊಡಬಾರದು. ಸವಿತಾ ಸಮಾಜಕ್ಕೆ ನಾನು ಸದಾ ಬೆಂಬಲವಾಗಿರುತ್ತೇನೆ ಎಂದರು.

ಪುತ್ತೂರು ವಿಧಾನ ಪರಿಷತ್ ಸದಸ್ಯ ಕಿಶೋರ್ ಮಾತನಾಡಿ, ಅತ್ಯಂತ ಸಣ್ಣ ಸಮಾಜಕ್ಕೂ ರಾಜಕೀಯ ಪ್ರಾಶಸ್ತ್ಯ ನೀಡುವ ಪಕ್ಷವಿದ್ದರೆ ಅದು ಬಿಜೆಪಿ ಮಾತ್ರ. ಬಿಜೆಪಿ ಪಕ್ಷವು ಸವಿತಾ ಸಮಾಜ–ಕ್ಕೂ ಪ್ರಾಶಸ್ತ್ಯ ನೀಡಿರುವುದ–ರಿಂದ ನಾನು ವಿಧಾನ ಪರಿಷತ್ ಸದಸ್ಯನಾಗಿದ್ದೇನೆ. ಸವಿತಾ ಸಮಾಜದ ಎಲ್ಲರೂ ಒಗ್ಗಟ್ಟಾಗಬೇಕು. ನಾನು ಹಾಗೂ ಶಾಸಕರು ಸ್ವಂತಕ್ಕಿಂತ ಸಮಾಜ–ಕ್ಕೇ ಸರ್ವಸ್ವ ಎನ್ನುವ ರೀತಿಯಲ್ಲಿ ಕೆಲಸ ಮಾಡುತ್ತಿದ್ದೇವೆ. ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಂದ ಭಾರತಕ್ಕೆ ವಿಶ್ವದ ಮಟ್ಟದಲ್ಲಿ ಕೀರ್ತಿ ಬಂದಿದೆ. ಆಪರೇಷನ್ ಸಿಂದೂರದಲ್ಲಿ ನಮ ಸೈನಿಕರು ತೋರಿದ ಪರಾಕ್ರಮವನ್ನು ಜಗತ್ತೆ ಕೊಂಡಾಡುತ್ತಿದೆ. ಇದೇ ರೀತಿಯಲ್ಲಿ ಸವಿತಾ ಸಮಾಜದ ಬಂಧುಗಳು ಸೇನಾನಿಗಳಂತೆ ಕಾರ್ಯನಿರ್ವಹಿಸಿ ಸಮಾಜದ ಏಳಿಗೆಗೆ ಬದ್ಧರಾಗಿರಬೇಕು. ನಾನು ಸಹ ನನ್ನ ಕೈಲಾದಷ್ಟು ಅನುದಾನವನ್ನು ಈ ಭವನದ ಮುಂದುವರಿದ ಕಾಮಗಾರಿಗೆ ನೀಡುತ್ತೇನೆ ಎಂದರು.

ಎಸ್ಎಸ್ಎಲ್‌ಸಿ, ಪಿಯುಸಿ ಹಾಗೂ ಪದವಿಯಲ್ಲಿ ಉತ್ತಮ ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳನ್ನು ಸನಾನಿಸಲಾಯಿತು.

ಪುರಸಭೆ ಅಧ್ಯಕ್ಷೆ ಜ್ಯೋತಿ ರಾಜ್ ಕುಮಾರ್, ಪುರಸಭಾ ಸದಸ್ಯರಾದ ರೇಖಾ ರುದ್ರಕುಮಾರ್, ಅನ್ನಪೂರ್ಣ, ಸಾಮಾಜಿಕ ಹೋರಾಟ ಗಾರ ಯಡೇಹಳ್ಳಿ ಆರ್. ಮಂಜುನಾಥ್, ಸವಿತಾ ಸಮಾಜದ ಜಿಲ್ಲಾಧ್ಯಕ್ಷ ರವಿಕುಮಾರ್, ತಾಲೂಕು ಅಧ್ಯಕ್ಷ ಸೋಮಶೇಖರ್, ಮಾಜಿ ಅಧ್ಯಕ್ಷ ನಾಗರಾಜ್, ಪದಾಧಿಕಾರಿಗಳಾದ ಆನಂದ್, ವಿನು, ಬಿಜೆಪಿ ತಾಲ್ಲೂಕು ಅಧ್ಯಕ್ಷ ಅಶ್ವಥ್ ಇತರರಿದ್ದರು.

# ನಿವೃತ್ತ ಉಪ ಪ್ರಾಂಶುಪಾಲ ಮುಳ್ಳಯ್ಯಗೆ ಬೀಳ್ಕೊಡುಗೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಳೇಬೀಡು: ಇಲ್ಲಿಯ ಉಡುಪಿ ಗ್ರಾಂಡ್ ಸಭಾಂಗಣದಲ್ಲಿ ಎಐಸಿಸಿ ಸದಸ್ಯ ಗಂಡಸಿ ಶಿವರಾಂ ಅಭಿಮಾನಿ ಬಳಗದಿಂದ ಮಂಗಳವಾರ ನಿವೃತ್ತ ಉಪ ಪ್ರಾಂಶುಪಾಲ ಮುಳ್ಳಯ್ಯ ಅವರನ್ನು ಅಭಿನಂದಿಸಲಾಯಿತು.

ಗಂಡಸಿ ಶಿವರಾಂ ಬೆಂಬಲಿಗರು ಹಾಗೂ ಮುಳ್ಳಯ್ಯ ಅಭಿಮಾನಿಗಳು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಎಐಸಿಸಿ ಸದಸ್ಯ ಗಂಡಸಿ ಶಿವರಾಂ ಮಾತನಾಡಿ, ಮುಳ್ಳಯ್ಯ 31 ವರ್ಷದ ಶೈಕ್ಷಣಿಕ ಸೇವೆಯಲ್ಲಿ ವಿದ್ಯಾರ್ಥಿ ಸ್ನೇಹಿಯಾಗಿ ಮನ್ನಣೆ ಪಡೆದಿದ್ದಾರೆ. ಶೈಕ್ಷಣಿಕ ಸೇವೆಯಲ್ಲಿ ಶಿಕ್ಷಕ ವೃಂದದ ವಿಶ್ವಾಸ ಗಳಿಸಿ ಉತ್ತಮ ಸೇವೆ ಮಾಡಿದ್ದಾರೆ. ಪೋಷಕರೊಂದಿಗೂ ಉತ್ತಮ ಬಾಂಧವ್ಯ ಹೊಂದಿದ್ದ ಅವರು ರಾಜನಶಿರಿಯೂರು ಹಾಗೂ ಹಳೇಬೀಡಿನ ಸರ್ಕಾರಿ ಪ್ರೌಢ ಶಾಲೆಯಲ್ಲಿ ವಿದ್ಯಾರ್ಥಿ ಸಂಖ್ಯೆ ಹೆಚ್ಚಿಸಿ ಸರ್ಕಾರಿ ಶಾಲೆ ಮುಚ್ಚದಂತೆ ಉಳಿಸಿದ್ದಾರೆ.

ಪ್ರೌಢ ಶಾಲೆ ಶಿಕ್ಷಕ, ಮುಖ್ಯ ಶಿಕ್ಷಕ, ಉಪ ಪ್ರಾಂಶುಪಾಲ, ಸಮೂಹ ಸಹಾಯಕ ಶಿಕ್ಷಣಾಧಿಕಾರಿ, ಕ್ಷೇತ್ರ ಸಮನ್ವಯಾಧಿಕಾರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಇಲಾಖೆಯ ಕೆಲಸವನ್ನು ಉತ್ತಮವಾಗಿ ನಿರ್ವಹಿಸಿದ್ದಾರೆ. ಅವರನ್ನು ಅಭಿನಂದಿಸುವುದು ನಮ ಕರ್ತವ್ಯ ಎಂದರು.

ನಿವೃತ್ತ ಉಪ ಪ್ರಾಂಶುಪಾಲ ಮುಳ್ಳಯ್ಯ ಮಾತನಾಡಿ, ಶೈಕ್ಷಣಿಕ ಸೇವೆಯಲ್ಲಿ ಶಿಕ್ಷಕ ವೃತ್ತಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿ ಕೆಲಸದ ವರೆಗೆ ಮಾಡಿದ ಸೇವೆಯನ್ನು ಪರಿಗಣಿಸಿ ವಿವಿಧ ಸಂಘ ಸಂಸ್ಥೆಯಿಂದ ಅಭಿನಂದಿಸುತ್ತಿದ್ದಾರೆ. ಶೈಕ್ಷಣಿಕ ಸೇವೆ ದೊರಕಿದ್ದು ಸಾರ್ಥಕ ಎನಿಸುತ್ತಿದೆ. 31 ವರ್ಷದ ಶಿಕ್ಷಣ ಸೇವೆಯಿಂದ ಮನಸ್ಸಿಗೆ ಹಿತ ದೊರಕಿದೆ ಎಂದರು.

ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ದೇಶಾಣಿ ಆನಂದ್ ಮಾತನಾಡಿ, ನಿವೃತ್ತಿ ನಂತರವೂ ಸರ್ಕಾರಿ ಸೇವೆ ಮಾಡಿದವರು ಗೌರವ ಉಳಿಸಿಕೊಳ್ಳುವುದು ಸುಲಭ ಸಾಧ್ಯವಲ್ಲ.

ಮುಳ್ಳಯ್ಯನವರು ಶಿಕ್ಷಣ ಸೇವೆಯಲ್ಲಿ ಅಪಾರ ಅಭಿಮಾನಿಗಳನ್ನು ಗಳಿಸಿದ್ದಾರೆ ಎಂದರು.

ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ಎಚ್.ಎನ್. ಶರತ್, ಬಿ.ಎಂ. ಸಂತೋಷ್, ಭೈರೇಶ್, ಎಚ್.ಬಿ. ಚಂದ್ರಶೇಖರ್ ಇದ್ದರು.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್ 11

**1297:** ಬ್ಯಾಟಲ್ ಆಫ್ ಸ್ಟಿರ್ಲಿಂಗ್ ಬ್ರಿಡ್ಜ್: ಸ್ಕಾಟ್ ನಾಯಕ ವಿಲಿಯಂ ವಾಲೆಸ್ ಇಂಗ್ಲಿಷರ ವಿರುದ್ಧ ದೊಡ್ಡ ಜಯ ಸಾಧಿಸಿದರು.

**1714:** ಸ್ಪೇನ್‌ನ ಬಾರ್ಸಿಲೋನಾ ನಗರವು ಬರ್ಬನ್ ಸೇನೆಗೆ ಶರಣಾಯಿತು. ಅದನ್ನು ಇಂದಿಗೂ ಕಟಲೋನಿಯಾದಲ್ಲಿ ರಾಷ್ಟ್ರೀಯ ದಿನವಾಗಿ ಆಚರಿಸುತ್ತಾರೆ.

**1789:** ಅಮೆರಿಕಾದಲ್ಲಿ ಅಲೆಕ್ಸಾಂಡರ್ ಹ್ಯಾಮಿಲ್ಟನ್ ಮೊಟ್ಟ ಮೊದಲ ಹಣಕಾಸು ಕಾರ್ಯದರ್ಶಿ ಆಗಿ ಅಧಿಕಾರ ಸ್ವೀಕರಿಸಿದರು.

**1906:** ಮಹಾತ್ಮ ಗಾಂಧಿಜಿ ದಕ್ಷಿಣ ಆಫ್ರಿಕಾದಲ್ಲಿ 'ಸತ್ಯಾಗ್ರಹ' ತತ್ವವನ್ನು ಮೊಟ್ಟಮೊದಲ ಬಾರಿಗೆ ಸಾರ್ವಜನಿಕವಾಗಿ ಘೋಷಿಸಿದರು.

**1948:** ಪಾಕಿಸ್ತಾನ ಸಂಸ್ಥಾಪಕ ಮೊಹಮದ್ ಅಲಿ ಜಿನ್ನಾ ನಿಧನರಾದರು.

**1965:** ಭಾರತಪಾಕಿಸ್ತಾನ ಯುದ್ಧ, ಈ ದಿನ ಎರಡೂ ದೇಶಗಳ ಸೇನೆಗಳ ನಡುವೆ ಕಠಿಣ ಹೋರಾಟ ನಡೆಯಿತು.

**1973:** ಚಿಲಿಯಲ್ಲಿ ಸೇನಾ ತಂತ್ರದಿಂದ ಪ್ರಸಿಡೆಂಟ್ ಸಲ್ವಡೊರ್ ಅಯೆಂಡೆ ಉರುಳಿಸಲ್ಪಟ್ಟರು, ಜನರಲ್ ಆಗುಸ್ಟೊ ಪಿನೋಚೆಟ್ ಅಧಿಕಾರಕ್ಕೆ ಬಂದರು.

**2001:** ಅಮೆರಿಕಾದಲ್ಲಿ ವಿಶ್ವ ವಾಣಿಜ್ಯ ಕೇಂದ್ರ ಮತ್ತು ಪೆಂಟಗಾನ್ ಮೇಲೆ ಉಗ್ರ ದಾಳಿ. ಸುಮಾರು 3,000 ಜನರು ಸಾವನ್ನಪ್ಪಿದರು.

**2012:** ಲಿಬಿಯಾದ ಬೆಂಗಾಜಿ ನಗರದಲ್ಲಿ ಅಮೆರಿಕಾದ ರಾಯಭಾರಿ ಕಚೇರಿಯ ಮೇಲೆ ದಾಳಿ.

### ಜನನ

**1862:** ಓ. ಹೆನ್ರಿ ಅಮೆರಿಕಾದ ಪ್ರಸಿದ್ಧ ಕಥೆಗಾರ

**1877:** ಫೆಲಿಕ್ಸ್ ಡ್ಜರ್ಝಿನ್ಸ್ಕಿ, ಸೋವಿಯತ್ ಕ್ರಾಂತಿಕಾರಿ ಮತ್ತು ಚೆಕಾ ( ಪೂರ್ವಗಾಮಿ) ಸಂಸ್ಥಾಪಕ

**1906:** ಮಾಂಟಗೊಮರಿ , ಹಾಲಿವುಡ್ ನಟ

**1917:** ಫರ್ಡಿನಾಂಡ್ ಮಾರ್ಕೋಸ್, ಫಿಲಿಪ್ಪೈನ್ಸ್‌ನ ಮಾಜಿ ಅಧ್ಯಕ್ಷ

**1922:** ಬಾಬ್ ಮೌಂಟ್‌ಗೊಮರಿ, ಅಮೆರಿಕನ್ ಬಾಕ್ಸರ್

### ಮರಣ

**1847:** ಮೇರಿ ಬೂತ್, ಅಮೆರಿಕನ್ ಮಹಿಳಾ ಹೋರಾಟಗಾರ್ತಿ

**1948:** ಮೊಹಮದ್ ಅಲಿ ಜಿನ್ನಾ, ಪಾಕಿಸ್ತಾನ ಸಂಸ್ಥಾಪಕ ಮತ್ತು ಮೊದಲ ಗವರ್ನರ್ ಜನರಲ್

**1971:** ನಿಕ್ಕಿತಾ ಕ್ರುಶ್ಚೇವ್,ಸೋವಿಯತ್ ಒಕ್ಕೂಟದ ಮಾಜಿ ಪ್ರಧಾನ ಕಾರ್ಯದರ್ಶಿ

**1973:** ಸಲ್ವಡೊರ್ ಅಯೆಂಡೆ, ಚಿಲಿ ರಾಷ್ಟ್ರಪತಿ

**2003:** ಆನಾ ಲಿಂಡನ್, ಸ್ವೀಡನ್ ವಿದೇಶಾಂಗ ಸಚಿವ

# ಭ್ರಷ್ಟ ಅಧಿಕಾರಿಗಳ ಸಹಿಸುವ ಮಾತೇ ಇಲ್ಲ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಪ್ರಾಮಾಣಿಕವಾಗಿ ಕೆಲಸ ಮಾಡುವ ಅಧಿಕಾ–ರಿಗಳಿಗೆ ಬೆಂಬಲಿಸುತ್ತೇನೆ, ಭ್ರಷ್ಟಾಚಾರ, ಸ್ವಜನ ಪಕ್ಷ ಪಾತ, ದುರಂಹಕಾರ ತೋರುವವನ್ನು ಯಾವ ಕಾರಣಕ್ಕೂ ಸಹಿಸುವುದಿಲ್ಲ ಎಂದು ಶಾಸಕ ಹೆಚ್.ಕೆ. ಸುರೇಶ್ ಹೇಳಿದರು.

ತಾಲ್ಲೂಕಿನ ಕೋನೇರ್ಲು ಗ್ರಾಮದಲ್ಲಿ ತೋಟಗಾ–ರಿಕೆ ಇಲಾಖೆ ವತಿಯಿಂದ ಅರ್ಹ ಫಲಾನುಭವಿಗಳಿಗೆ ಸವಲತ್ತು ವಿತರಿಸಿ ಮಾತನಾಡಿ, ಭ್ರಷ್ಟಾಚಾರ ರಹಿತ ತಾಲ್ಲೂಕನ್ನು ಮಾಡುವುದಾಗಿ ಚುನಾವಣೆ ಸಂದರ್ಭದಲ್ಲಿ ಭರವಸೆ ನೀಡಿದ್ದೆ. ಆ ಮಾತಿಗೆ ಇಂದಿಗೂ ಬದ್ಧನಾಗಿದ್ದು ಕೈಲಾದ ಮಟ್ಟಿಗೆ ತಹಬದಿಗೆ ತಂದಿದ್ದೇನೆ.

ಕೈಕೆಳಗಿನ ನೌಕರ–ರಿಗೆ ರಾತ್ರಿ ವೇಳೆ ಕರೆ ಮಾಡಿ ಕಿರುಕುಳ ಕೊಡುವುದು, ಅಡುಗೆ ಸಹಾಯಕರಿಂದ ಹಣ ಕೇಳುವುದು ಸೇರಿ ಹಲವಾರು ದೂರುಗಳಿರುವ ಅಧಿಕಾರಿಯನ್ನು ಬೆನ್ನು ತಟ್ಟಿ ಪ್ರೋತ್ಸಾಹಿಸಬೇಕಾ ಅಥವಾ ಶಿಕ್ಷಿಸಬೇಕಾ. ನಾನು ರೈತ ಕುಟುಂಬದಿಂದ ಬಂದವನು ಯಾವುದೇ ಕಾರಣಕ್ಕೂ ಭ್ರಷ್ಟಾಚಾರಕ್ಕೆ ತಲೆಬಾಗುವುದಿಲ್ಲ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಿರುದ್ಧ ಕಿಡಿಕಾರಿದರು.

ಕೃಷಿ ಮತ್ತು ತೋಟಗಾ–ರಿಕೆ ಇಲಾಖೆಗಳು ರೈತರ ಜೀವನಾಡಿಯಾಗಿವೆ. ಈ ಇಲಾಖೆಗಳು ಸಮರ್ಪಕವಾಗಿ ಕೆಲಸವನ್ನು ನಿರ್ವಹಿಸಿದರೆ ರೈತರು ಉತ್ತಮ ಬೆಳೆಯಲು ಸಾಧ್ಯ. ಈ ನಿಟ್ಟಿನಲ್ಲಿ ತೋಟಗಾ–ರಿಕೆ ಇಲಾಖೆಯಿಂದ 20 ಟ್ರ್ಯಾಕ್ಟರ್, ಐದು ಕೊಬ್ಬರಿ ಶೆಡ್, ನಾಲ್ಕು ಫಾರಂ ಗೇಟ್, ದಾಳಿಂಬೆ ಗಿಡ ಜೊತೆಗೆ ಮಲೆನಾಡು ಭಾಗದಲ್ಲಿ ಮೆಣಸು ಬೆಳೆಗೆ ಹೆಚ್ಚು ಪ್ರಾಮುಖ್ಯತೆ ಇರುವುದರಿಂದ ಐನೂರಕ್ಕೂ ಹೆಚ್ಚು ರೈತರಿಗೆ ಗಿಡಗಳು ಹಾಗೂ ಔಷಧಿಯನ್ನು ನೀಡಲಾಗುತ್ತಿದೆ ಎಂದರು.

ತಾಲ್ಲೂಕು ಬಿಜೆಪಿ ಮಂಡಲ ಅಧ್ಯಕ್ಷ ಕೌರಿ ಸಂಜಯ್, ಬಸವರಾಜ್, ಧರ್ಮೇಗೌಡ ವಿಜಯ್, ಕುಮಾರ್ ಬಿರಟೆಮನೆ, ಸುರೇಶ್, ಬಂಡೆ ರಮೇಶ್, ಶೇಖರ್, ಸಂಗಪ್ಪ, ಮೋಹನ್ ಇತರರಿದ್ದರು.

# ಮಹಿಳೆ ಕೊಂದು ನಾಲ್ಕು ದಿನಗಳ ಬಳಿಕ ಆತ್ಮಹತ್ಯೆಗೆ ಶರಣಾದ ವ್ಯಕ್ತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅರಸೀಕೆರೆ ತಾಲ್ಲೂಕಿನ ಎಸ್. ಡಿಗ್ಗೇನಹಳ್ಳಿ ಗ್ರಾಮದಲ್ಲಿ ಚಿನ್ನದ ಸರಕ್ಕಾಗಿ ಮಹಿಳೆಯನ್ನು ಕೊಂದು ವ್ಯಕ್ತಿಯೊಬ್ಬ ನಾಲ್ಕು ದಿನಗಳ ಬಳಿಕ ತಾನು ಆತಹತ್ಯೆಗೆ ಶರಣಾಗಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಗ್ರಾಮದ ಪಾಲಾಕ್ಷ ಎಂಬುವರ ಪತ್ನಿ ಶಕುಂತಲ (48) ಕೊಲೆಯಾದ ಮಹಿಳೆ. ಆಕೆಯ ಸಂಬಂಧಿಯೇ ಆಗಿದ್ದ ಶಿವಮೂರ್ತಿ (55) ನೇಣಿಗೆ ಶರಣಾಗಿದ್ದಾನೆ. ಮಹಿಳೆ ಕೊರಳಿಂದ ಚಿನ್ನದ ಸರ ಕಿತ್ತುಕೊಂಡು ಹೋಗಿದ್ದ ಆತ ಪೊಲೀಸರಿಗೆ ಸಿಕ್ಕಿಬೀಳುತ್ತೇನೆಂಬ ಭಯದಿಂದ ಆತಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾಗಿದೆ.ಕೃಷಿಕರಾಗಿರುವ ಪಾಲಾಕ್ಷ ಆ. 20 ರಂದು ಜಮೀನು ಕೆಲಸ ಮುಗಿಸಿ ಮಧ್ಯಾಹ್ನ ಮನೆಗೆ ಬಂದಾಗ ಅಡುಗೆ ಕೋಣೆಯಲ್ಲಿ ಶಕುಂತಲ ಮಲಗಿದ ಸ್ಥಿತಿಯಲ್ಲಿ ಬಿದ್ದಿದ್ದರು. ಉಸಿರುಗಟ್ಟಿಸಿ ಕೊಲೆ ಮಾಡಿರುವ ಹಾಗು ಕೊರಳಲ್ಲಿ ಚಿನ್ನದ ಸರ ಇಲ್ಲದೆ ಇರುವುದು ಗೊತ್ತಾಗಿದೆ. ಈ ಸಂಬಂಧ ಪಾಲಾಕ್ಷ ಅವರು ಕೊಲೆ ಪ್ರಕರಣ ದಾಖಲಿಸಿದ್ದರು. ಪತ್ನಿ ಶಕುಂತಲಳ ಸಂಬಂಧಿಯೇ ಆಗಿದ್ದ ಶಿವಮೂರ್ತಿ ಆಗಾಗ ಮನೆಗೆ ಬರುತ್ತಿದ್ದ. ಅತಿಯಾದ ಸಾಲ ಮಾಡಿಕೊಂಡಿದ್ದ. ನನ್ನ ಹೆಂಡತಿ ಬಳಿ ಸಾಲ ಕೇಳುತ್ತಿದ್ದನೆಂದು ಪಾಲಾಕ್ಷ ಆರೋಪಿಸಿದ್ದರು.

ಪ್ರಕರಣ ದಾಖಲಿಸಿಕೊಂಡಿದ್ದ ಜಾವಗಲ್ ಠಾಣೆ ಪೊಲೀಸರು ಶಿವಮೂರ್ತಿ ಪತ್ತೆಗೆ ಬಲೆ ಬೀಸಿದ್ದರು. ಪೊಲೀಸರು ತನ್ನ ಬೆನ್ನು ಬಿದ್ದಿದ್ದಾರೆಂಬ ವಿಚಾರ ಗೊತ್ತಾಗುತ್ತಿದ್ದಂತೆ ಶಿವಮೂರ್ತಿ ಹೆದರಿ ಆ. 24 ರಂದು ಮನೆಗೆ ಹೊಂದಿಕೊಂಡಿರುವ ಕೊಟ್ಟಿಗೆಯಲ್ಲಿ ನೇಣು ಹಾಕಿಕೊಂಡಿದ್ದಾನೆ.

ಆ. 20ರ ಮಧ್ಯಾಹ್ನ 12 ಗಂಟೆ ಸುಮಾರಿಗೆ ಮನೆಗೆ ಬಂದಿದ್ದ ಶಿವಮೂರ್ತಿ ಚಿನ್ನದ ಸರ ಕೊಡುವಂತೆ ಶಕುಂತಲ ಅವರೊಂದಿಗೆ ಜಗಳ ಮಾಡಿದ್ದಾನೆ. ಸರ ಕೊಡಲು ಮಹಿಳೆ ಒಪ್ಪದೇ ಇದ್ದಾಗ ಉಸಿರುಗಟ್ಟಿಸಿ ಸಾಯಿಸಿ, ಮಾಂಗಲ್ಯ ಸರ ಕಿತ್ತುಕೊಂಡು ಪರಾರಿಯಾಗಿದ್ದ ಎಂದು ತಿಳಿದುಬಂದಿದೆ. ಜಾವಗಲ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವರ್ತಕರ ಸಮಸ್ಯೆಗೆ ಪರಿಹಾರದ ಭರವಸೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲ್ಲೂಕಿನ ವರ್ತಕರ ಸಮಸ್ಯೆ ಬಗೆಹರಿಸಲು ಸಂಘವು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ವರ್ತಕರ ಸಂಘದ ಅಧ್ಯಕ್ಷ ಬಿ.ಎಂ. ಮಧುಕುಮಾರ್ ಭರವಸೆ ನೀಡಿದರು.

ಪಟ್ಟಣದ ಸಣ್ಣೇಗೌಡ ಕಾಂಪ್ಲೆಕ್ಸ್‌ನಲ್ಲಿ ನಡೆದ ತಾಲ್ಲೂಕು ವರ್ತಕರ ಸಂಘದ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿ, ವರ್ತಕರು ಹಾಗೂ ಉದ್ಯಮಿಗಳ ಅನುಕೂಲಕ್ಕಾಗಿ ಸರ್ಕಾರದ ಸವಲತ್ತು, ನೀತಿ ನಿಯಮಗಳನ್ನು ತಿಳಿಸುವ ಕಾರ್ಯಾಗಾರವನ್ನು ಈ ಬಾರಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಆಯೋಜಿಸಲಾಗಿತ್ತು. ಇಂತಹ ಸವಲತ್ತುಗಳನ್ನು ವರ್ತಕರು ಸದುಪಯೋಗಪಡಿಸಿಕೊಳ್ಳಬೇಕು. ಪಟ್ಟಣದಲ್ಲಿ ಅಂಗಡಿಗಳ ಸರಣಿ ಕಳ್ಳತನ ಹಾಗೂ ಟ್ರಾಫಿಕ್ ಸಮಸ್ಯೆಗಳ ಕುರಿತು ಪೊಲೀಸರ ಜೊತೆ ಹಲವು ಬಾರಿ ಚರ್ಚೆ ನಡೆಸಲಾಗಿದೆ. ಈ ಬಗ್ಗೆ ಶಾಸಕರೊಂದಿಗೆ ಮಾತುಕತೆ ನಡೆಸಿದ್ದು, ಮುಂದಿನ ದಿನಗಳಲ್ಲಿ ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗುವುದು ಎಂದು ಹೇಳಿದರು.

ಸಂಘವು ನಿರ್ದೇಶಕರ ಸಹಕಾರದಿಂದ ಹಲವು ಸಮಾಜಮುಖಿ ಕೆಲಸಗಳನ್ನು ಕೈಗೊಂಡಿದೆ. ತಾಲ್ಲೂಕಿನಲ್ಲಿರುವ ಎಲ್ಲಾ ವ್ಯಾಪಾರಿಗಳು ಸದಸ್ಯತ್ವ ಪಡೆದು ಕಾರ್ಯಚಟುವಟಿಕೆಗಳಲ್ಲಿ ಸಹಕರಿಸಬೇಕು. ಮುಂದಿನ ದಿನಗಳಲ್ಲಿ ವರ್ತಕರ ಸಂಘಕ್ಕೆ ಸ್ವಂತ ನಿವೇಶನ ಖರೀದಿಸಿ ಕಟ್ಟಡವನ್ನು ನಿರ್ಮಿಸುವ ಉದ್ದೇಶವಿದೆ. ಈ ಕಾರ್ಯಕ್ಕೆ ಎಲ್ಲಾ ವರ್ತಕರು ಸಹಕ–ರಿಸಬೇಕು ಎಂದರು.

ಪ್ರಧಾನ ಕಾರ್ಯದರ್ಶಿ ಎಚ್.ಆರ್. ಮಂಜುನಾಥ ಕಳೆದ ಸಾಲಿನ ವಾರ್ಷಿಕ ವರದಿ ಮಂಡಿಸಿದರು. ಖಜಾಂಚಿ ಸತ್ಯನಾರಾಯಣ ಲೆಕ್ಕಪತ್ರ ಮಾಹಿತಿ ನೀಡಿದರು.

ಸಂಘದ ಉಪಾಧ್ಯಕ್ಷ ಜವಾರ್ಲಾಲ್ ಜೈನ್, ಸಹಕಾರ್ಯದರ್ಶಿ ಬಿ.ಜಿ. ಲೋಹಿತ್, ಜೆ.ಸಿ. ರಾಘವೇಂದ್ರ, ಸಹಕಾರ ಸಂಘದ ಉಪಾಧ್ಯಕ್ಷ ಟಿ. ರಾಜ್‌ಕುಮಾರ್ ಹಾಜರಿದ್ದರು.

# ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ: ಸಿದ್ಧತೆಗೆ ಡಿಸಿ ಸೂಚನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿ ಸರ್ಕಾರದಿಂದ ಕಾಲ ಕಾಲಕ್ಕೆ ನೀಡಲಾಗುವ ಮಾರ್ಗಸೂಚಿ, ಆದೇಶ, ನಿರ್ದೇಶನದನ್ವಯ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಮನ್ವಯದೊಂದಿಗೆ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚಿಸಿದ್ದಾರೆ.

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷಾ ಕಾರ್ಯ ಕುರಿತು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಯೋ ಟ್ಯಾಗ್ ಮಾಡಿ, ಮನೆಗಳಿಗೆ ಸ್ಟಿಕ್ಕರ್ ಅಂಟಿಸಲು ಕ್ರಮವಹಿಸಲು ಸೆಸ್ಕ್ ಅಧಿಕಾ–ರಿಗಳಿಗೆ ತಿಳಿಸಿದರು.



ಗಣತೀದಾರರು ಮತ್ತು ಮೇಲ್ವಿಚಾರಕರ ಮಾಹಿತಿಯನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಹಾಗೂ ಆಯಾ ತಾಲ್ಲೂಕಿನ ತಹಶೀಲ್ದಾರ್‌ಗೆ ನೀಡಲು ಮತ್ತು ರಾಜ್ಯ ಮಟ್ಟದ ಮಾಸ್ಟರ್‌ಟ್ರೈನರ್ಸ್‌ತರಬೇತಿಗೆ ನಿಯೋಜನೆ ಮಾಡಲು ಕ್ರಮ ವಹಿಸುವಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯಉಪ ನಿರ್ದೇಶಕರು ಮತ್ತು ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾ–ರಿಗಳಿಗೆ ಸೂಚಿಸಿದರು.

ತಾ.ಪಂ. ಕಾರ್ಯ ನಿರ್ವಹಣಾಧಿಕಾರಿ, ಬಿಇಒ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವ–ರಿಗೆ ತಿಳಿಸಿದರು.ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್ಸ್ ಗಳಿಂದ ಗಣತೀದಾರರಿಗೆ ಮತ್ತು ಮೇಲ್ವಿಚಾರಕರಿಗೆ ಸೆ.12 ರಿಂದ 19 ರೊಳಗೆ ಯಾವುದಾದರೂ 02 ದಿನಗಳಲ್ಲಿ ತರಬೇತಿ ನೀಡಲು ಕ್ರಮ ವಹಿಸುವಂತೆ ಜಿಲ್ಲೆಯ ಎಲ್ಲಾ ತಹಶೀಲ್ದಾರ್, ತಾ.ಪಂ. ಕಾರ್ಯ ನಿರ್ವಹಣಾಧಿಕಾರಿ, ಬಿ.ಇ.ಒ ಮತ್ತು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರಿಗೆ ತಿಳಿಸಿದರು. ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯನ್ನು ಸೆ.22 ರಿಂದ ಅ. 7 ರವರೆಗೆ ನಡೆಸಲು ಜಿಲ್ಲೆಯ ಎಲ್ಲಾ ತಹಶೀಲ್ದಾರ್, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಧಿಕಾರಿ, ಬಿಇಒ ಮತ್ತು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗೆ ಸೂಚಿಸಿದರು.

ವಿದ್ಯುತ್ ಸಂಪರ್ಕವಿಲ್ಲದಿರುವ ಹಾಗೂ ನೆಟ್ವರ್ಕ್ ಇಲ್ಲದಿರುವ ಹಾಡಿ, ಗುಡಿಸಲು, ಶ್ಯಾಡೋ ಮನೆಗಳು,ಅಲೆಮಾರಿ/ ಅರೆಜನಾಂಗದವರ ಟೆಂಟ್‌ಗಳು ಇತ್ಯಾದಿಗಳನ್ನು ಗುರುತಿಸಿ ಜಿಲ್ಲಾ ಹಿಂದುಳಿದ ಕಲ್ಯಾಣಾಧಿಕಾ–ರಿಗಳಿಗೆ ವರದಿ ನೀಡಲು ಜಿಲ್ಲೆಯ ಎಲ್ಲಾ ತಹಶೀಲ್ದಾರ್ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದರು.

ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯ ಸಂಬಂಧ ಸಾರ್ವಜನಿಕರಿಗೆ ಅರಿವು ಮೂಡಿಸುವ ಸಂಬಂಧ ಸಮೀಕ್ಷೆ ಕಾರ್ಯ ಮುಗಿಯುವವರೆಗೂ ಪತ್ರಿಕಾ ಪ್ರಕಟಣೆ ನೀಡಲು ಅಧಿಕಾರಿಗಳಿಗೆ ಕ್ರಮ ವಹಿಸುವಂತೆ ತಿಳಿಸಿದರು.

ನಿಗದಿಪಡಿಸಿರುವ ಕಾಲಮಿತಿಯೊಳಗೆ ಸಂಬಂಧಿಸಿದ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿಯ ಸದಸ್ಯರು ಮೇಲ್ಕಂಡ ಅಧಿಕಾರಿಗಳಿಂದ ತಮ ವ್ಯಾಪ್ತಿಗೆ ಬರುವ ವಿಭಾಗ ಮಟ್ಟ, ತಾಲ್ಲೂಕು ಮಟ್ಟದ ಮಾಹಿತಿಯನ್ನು ಪಡೆದು ಕ್ರೂಢೀಕರಿಸಿ ಹಾಗೂ ದೃಢೀಕರಿಸಿ ಪ್ರತಿ ದಿನ ಸದಸ್ಯ ಕಾರ್ಯದರ್ಶಿಗಳಾದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ವರದಿ ನೀಡಲು ಹಾಸನ ಸಕಲೇಶಪುರ ಉಪ ವಿಭಾಗಾಧಿಕಾರಿಗಳು ಕ್ರಮವಹಿಸಲು ಸೂಚಿಸಿದರು.

ತಾಲ್ಲೂಕು ಹಂತದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಸಂಬಂಧ, ಗಣತಿದಾರರಿಗೆ ಮತ್ತು ಮೇಲ್ವಿಚಾರಕ–ರಿಗೆ ಶಾಲಾ ಅವಧಿ ಮುಗಿದ ನಂತರ ಅಥವಾ ಸಾರ್ವಜನಿಕ ರಜೆ ದಿನದಂದು ಟ್ರೈನಿಂಗ್ ಸ್ಥಳವನ್ನು ತಹಶೀಲ್ದಾರ್ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಗುರುತಿಸಿ ಸೆ.12ರಿಂದ 19 ರೊಳಗೆ ಗಣತಿದಾರರಿಗೆ 2 ಬಾರಿ ತರಬೇತಿ ನೀಡಬೇಕು ಎಂದು ನಿರ್ದೇಶನ ನೀಡಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248